ದಿನಾಂಕ 09-11-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎ.ಸಿ.ಎಸ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿಃ 08-11-2023 ರ ಒಟ್ಟು ಮೊಕ್ತಿಯಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ನೆಲ್ಲಿಬೀಡ ಗ್ರಾಮದ ಸ ನಂಃ 25/1 ಅ+1 ಬ ಜಮೀನಿನ ಕೈ ಬರವಣಿಗೆಯ ಪಹಣಿ ಪತ್ರಿಕೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ಋಣಬಾರ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-3 ಎಂದು, ನೆಲ್ಲಿಬೀಡ ಗ್ರಾಮದ ಸ ನಂಃ 25/ಅ+1 ಬ ಜಮೀನಿನ 2002-03, 2018-19 ಮತ್ತು 2001-02 ನೇ ಸಾಲುಗಳ 3 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ-4 ರಿಂದ 6 ಎಂದು, ದಿಃ 06-06-1977 ರ ನೋಂದಾಯಿತ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ-7 ಎಂದು, ದಿಃ 19-04-1984 ರ ನೋಂದಾಯಿತ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-8 ಎಂದು, ಡ ಸಂಃ 1502 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-9 ಎಂದು ಮತ್ತು ದಿಃ 29-10-2004 ರ ನೋಂದಾಯಿತ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ-10 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು**)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ.

ಸಾಕ್ಷಿದಾರರ ಸಹಿ